# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **1555**

ಸದಸ್ಯರ ಹೆಸರು : ಶ್ರೀ ಪ್ರಕಾಶ್ ಕೆ. ರಾಥೋಡ್
(ನಾಮನಿರ್ದೇಶನ ಹೊಂದಿದವರು)

ಉತ್ತರಿಸಬೇಕಾದ ಸಚಿವರು : ಮಾನ್ಯ ಸಾರಿಗೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು

ಉತ್ತರಿಸಬೇಕಾದ ದಿನಾಂಕ : 11-03-2022

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿ ವಾಹನ ಫಿಟ್‌ನೆಸ್‌ಗೆ ಹೈಟೆಕ್ ವ್ಯವಸ್ಥೆ ಮಾಡಲು ಯೋಜಿಸಲಾಗಿದೆಯೇ; | ಹೌದು |
| ಆ. | ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಯಾವ ಯಾವ ಆರ್.ಟಿ.ಓ ಕಛೇರಿಗಳನ್ನು ಗುರುತಿಸಲಾಗಿದೆ; | ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಹಂತ ಹಂತವಾಗಿ ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿನ ಆರ್.ಟಿ.ಓ ಕಛೇರಿಗಳಲ್ಲಿ ವಾಹನ ತಪಾಸಣಾ ಮತ್ತು ಪ್ರಮಾಣೀಕರಣ ಕೇಂದ್ರ ಸ್ಥಾಪಿಸಲು ಉದ್ದೇಶಿಸಲಾಗಿದೆ.<br><br>ಪ್ರಸ್ತುತ ನೆಲಮಂಗಲ, ಮೈಸೂರು ಮತ್ತು ಧಾರವಾಡದಲ್ಲಿ ವಾಹನ ತಪಾಸಣಾ ಮತ್ತು ಪ್ರಮಾಣೀಕರಣ ಕೇಂದ್ರಗಳನ್ನು ಸ್ಥಾಪಿಸಿ ಕಾರ್ಯಾಚರಣೆಗೊಳಿಸಲಾಗಿದೆ.<br><br>2022-23ನೇ ಸಾಲಿನಲ್ಲಿ ಜ್ಞಾನಭಾರತಿ, ದೇವನಹಳ್ಳಿ, ಶಿವಮೊಗ್ಗ, ಬಳ್ಳಾರಿ ಬಾಗಲಕೋಟೆ, ಮಂಗಳೂರು, ವಿಜಯನಗರ (ಹೊಸಪೇಟೆ) ಮತ್ತು ವಿಜಯಪುರಗಳಲ್ಲಿ ವಾಹನ ತಪಾಸಣಾ ಮತ್ತು ಪ್ರಮಾಣೀಕರಣ ಕೇಂದ್ರಗಳನ್ನು ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರದ ವತಿಯಿಂದ ಅನುಷ್ಠಾನಗೊಳಿಸಲು ಪ್ರಸ್ತಾಪಿಸಲಾಗಿದೆ. |
| ಇ. | ಬೆಂಗಳೂರಿನಲ್ಲಿ ಅತ್ಯಧಿಕ ವಾಹನಗಳು ಇದ್ದರೂ ಸಹ ಯಾವುದೇ ವಾಹನ ತಪಾಸಣೆ ಮತ್ತು ಪ್ರಮಾಣಿಕರಣ ಕೇಂದ್ರ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೆಂಗಳೂರಿನ ನೆಲಮಂಗಲ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿ ವ್ಯಾಪ್ತಿಯಲ್ಲಿ ವಾಹನ ತಪಾಸಣೆ ಮತ್ತು ಪ್ರಮಾಣೀಕರಣ ಕೇಂದ್ರವನ್ನು ಕಾರ್ಯಾಚರಣೆಗೊಳಿಸಲಾಗಿದೆ.<br>ಬೆಂಗಳೂರಿನ ಚೊಕ್ಕನಹಳ್ಳಿಯಲ್ಲಿ ವಾಹನ ತಪಾಸಣೆ ಮತ್ತು ಪ್ರಮಾಣೀಕರಣ ಕೇಂದ್ರವನ್ನು ನಿರ್ಮಿಸಲಾಗುತ್ತಿದೆ. |

| | | |
|---|---|---|
| ಈ. | ಬೆಂಗಳೂರಿನಲ್ಲಿ ವಾಹನ ತಪಾಸಣೆ ಮತ್ತು ಪ್ರಮಾಣೀಕರಣ ಕೇಂದ್ರ ಸ್ಥಾಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಎಲ್ಲಾ ತಪಾಸಣೆ ಕೇಂದ್ರಗಳಿಗೆ ತಗಲುವ ವೆಚ್ಚ ಎಷ್ಟು? (ವಿವರ ನೀಡುವುದು) | 2022-23 ರಲ್ಲಿ ಬೆಂಗಳೂರಿನ ಜ್ಞಾನಭಾರತಿ ಮತ್ತು ದೇವನಹಳ್ಳಿಯಲ್ಲಿ ವಾಹನ ತಪಾಸಣೆ ಮತ್ತು ಪ್ರಮಾಣೀಕರಣ ಕೇಂದ್ರ ಸ್ಥಾಪಿಸಲು ಪ್ರಸ್ತಾಪಿಸಲಾಗಿದೆ.<br>ಒಂದು ತಪಾಸಣಾ ಕೇಂದ್ರಕ್ಕೆ ಸರಿಸುಮಾರು 15.00 ಕೋಟಿಗಳಂತೆ, ಇನ್ನೂ ನಿರ್ಮಿಸಲು ಉದ್ದೇಶಿಸಿರುವ 28 ಕೇಂದ್ರಗಳಿಗೆ ರೂ.420.00 ಕೋಟಿಗಳಾಗುತ್ತದೆ ಎಂದು ಅಂದಾಜಿಸಲಾಗಿದೆ. |

ಟಿಡಿ 32 ಟಿಡಿಕ್ಯೂ 2022

(ಬಿ. ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ
ಪಂಗಡಗಳ ಕಲ್ಯಾಣ ಸಚಿವರು